## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರವಾರ

**ಸಿ.ಸಿ. ನಂ. 2186/23**

ಚಾ.ಸಾ. 5

ಪ್ರಾ.ಸಾ. 4

| | | |
|---|---|---|
| ಸಾಕ್ಷಿದಾರರ ಹೆಸರು | – | ಅವಿನಾಶ ರಾಣೆ |
| ತಂದೆಯ ಹೆಸರು | – | ಸಯರುಬಾಯ್ ರಾಣೆ |
| ವಯಸ್ಸು | – | 65 ವರ್ಷ |
| ಉದ್ಯೋಗ | – | ನಿವೃತ್ತ ಇಂಜನಿಯರ್ |
| ವಾಸ್ತವ್ಯ | – | ಸದಾಶಿವಗಡ, ಕಾರವಾರ |

(ಇಂದು ದಿನಾಂಕಃ 13–10–2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

(ಸಾಕ್ಷಿದಾರರು ಹಿಂದಿ ಭಾಷೆ ಮಾತನಾಡುವವರಾಗಿದ್ದರಿಂದ ವಕೀಲರಾಗಿರುವ ಶ್ರೀ ಎಸ್.ವಿ.ಬಿ. ವಕೀಲರನ್ನು ಕನ್ನಡ ಭಾಷೆಗೆ ಭಾಷಾಂತರ ಮಾಡಲು ನೇಮಿಸಿಕೊಳ್ಳಲಾಯಿತು.)

**ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ಸುಮಾರು 2 ವರ್ಷಗಳ ಹಿಂದೆ ಮಧ್ಯಾಹ್ನ 1.30 ಗಂಟೆ ಸಮಯದಲ್ಲಿ ಪೊಲೀಸರು ನಾನು ಮತ್ತು ಮತ್ತೊಬ್ಬ ಪಂಚರೊಂದಿಗೆ ಆರೋಪಿ ತೋರಿಸಿದ ಸ್ಥಳದಲ್ಲಿ ಆರೋಪಿಗೆ ಸೇರಿದ ಕೃಷಿ ಜಮೀನಿನಲ್ಲಿ ಮಹಜರ ಮಾಡಿದ್ದಾರೆ, ಯಾವ ಕಾರಣಕ್ಕಾಗಿ ಮಹಜರ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ ಹಾಗೂ ಭಾವಚಿತ್ರಗಳನ್ನು ತೆಗೆದುಕೊಂಡಿದ್ದಾರೆ. ಮಹಜರನಲ್ಲಿರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಮಹಜರನ್ನು ನಿ.ಪಿ.4 ಎಂದು, ಸಾಕ್ಷಿ ಸಹಿಯನ್ನು ನಿ.ಪಿ.4(ಎ) ಎಂದು ಗುರುತಿಸಲಾಯಿತು. ಭಾವಚಿತ್ರವನ್ನು ನಿ.ಪಿ.5 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಮಾನ್ಯ ಹಿರಿಯ ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

C.W. 5, P.W. 4

**(ಆರೋಪಿ ಹಾಜರಿದ್ದು ಈ ಹಿಂದೆ ಜಿಲ್ಲಾ ಸೇವಾ ಕಾನೂನು ಪ್ರಾಧಿಕಾರದವರು ಕೊಟ್ಟ ಅವಧಿ ಮುಗಿದಿದ್ದರಿಂದ ಬೇರೆ ವಕೀಲರನ್ನು ನೇಮಕ ಮಾಡಿಕೊಳ್ಳುವುದಾಗಿ ಹೇಳಿದ್ದರಿಂದ ಪಾಟೀ ಸವಾಲನ್ನು ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ